**All India Radio: Bangalore**
**Regional Bulletin In Kannada**
**27.07.2025 / 2.30pm**

ಆಕಾಶವಾಣಿ, ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಚಿತ್ರದುರ್ಗ, ಗುಲ್ಬರ್ಗ, ಕೋಟೆ ಅವರ್ಣನೀಯ - ಮನ್ ಕಿ ಬಾತ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅಭಿಮತ
- ಮಂಗಳೂರಿನಲ್ಲಿ ತಂತ್ರಜ್ಞಾನದ ಮೂಲಕ ತ್ಯಾಜ್ಯ ನಿರ್ವಹಣೆ - ಪ್ರಧಾನಿ ಶ್ಲಾಘನೆ
- ರಾಜ್ಯದಲ್ಲಿ ಎಪಿಎಲ್, ಬಿಪಿಎಲ್ ಕಾರ್ಡ್ ಪರಿಷ್ಕರಣೆಯಾಗಬೇಕು - ಆಹಾರ ಸಚಿವ ಕೆ.ಎಚ್.ಮುನಿಯಪ್ಪ
- ರಸಗೊಬ್ಬರ ಕೊರತೆ ಹಿನ್ನೆಲೆ - ನಾಳೆ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆಗೆ ಬಿಜೆಪಿ ನಿರ್ಧಾರ
- ರಾಜ್ಯದ ವಿವಿಧೆಡೆ ಧಾರಾಕಾರ ಮಳೆ - ಚಿಕ್ಕಮಗಳೂರು, ಕೊಡಗಿನಲ್ಲಿ ಜನಜೀವನ ವ್ಯತ್ಯಯ

><><><><><><><><><><><><><><

೨೧ನೇ ಶತಮಾನದ ಭಾರತದಲ್ಲಿ, ವಿಜ್ಞಾನ ಹೊಸ ಶಕ್ತಿಯೊಂದಿಗೆ ಮುನ್ನಡೆದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯ ಪಟ್ಟಿದ್ದಾರೆ. ೧೨೪ನೇ ಆವೃತ್ತಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿಂದು ಸಮಸ್ತ ಭಾರತೀಯರನ್ನುದ್ದೇಶಿಸಿ ಮಾತನಾಡಿದ ಅವರು, ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಬಾಹ್ಯಾಕಾಶದಿಂದ ಭೂಮಿಗೆ ಮರಳಿದ ಬಳಿಕ ವಿದ್ಯಾರ್ಥಿಗಳಲ್ಲಿ ಬಾಹ್ಯಾಕಾಶ ಅಧ್ಯಯನದ ಬಗ್ಗೆ ಆಸಕ್ತಿ ಹೆಚ್ಚಿದೆ ಎಂದು ಹೇಳಿದ್ದಾರೆ. ಅದರಲ್ಲೂ ಚಂದ್ರಯಾನ ೩ ಬಳಿಕ, ಹಲವು ವಿದ್ಯಾರ್ಥಿಗಳು ಬಾಹ್ಯಾಕಾಶ ವಿಜ್ಞಾನಿ ಆಗುವ ಕನಸು ಹೊತ್ತಿದ್ದಾರೆ ಎಂದು ಸಂತಸ

ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ಯುನೆಸ್ಕೋ ೧೨ ಮರಾಠಾ ಕೋಟೆಗಳನ್ನು ವಿಶ್ವ ಪರಂಪರೆಯ ತಾಣಗಳೆಂದು ಗುರುತಿಸಿದೆ. ಇವುಗಳಲ್ಲಿ ಮಹಾರಾಷ್ಟ್ರದ ೧೧ ಕೋಟೆಗಳು ಮತ್ತು ತಮಿಳುನಾಡಿನ ಒಂದು ಕೋಟೆ ಸೇರಿವೆ. ಕೆಲವು ವರ್ಷಗಳ ಹಿಂದೆ, ರಾಯಗಡಕ್ಕೆ ಭೇಟಿ ನೀಡಿದಾಗ, ಛತ್ರಪತಿ ಶಿವಾಜಿ ಮಹಾರಾಜರ ಪ್ರತಿಮೆಯ ಮುಂದೆ ನಮಸ್ಕರಿಸುವ ಅವಕಾಶ ಸಿಕ್ಕಿತ್ತು ಎಂದು ತಿಳಿಸಿದ್ದಾರೆ. ಕರ್ನಾಟಕದ ಕೋಟೆಗಳನ್ನೂ ಪ್ರಸ್ತಾಪಿಸಿರುವ ಪ್ರಧಾನಿ, ಗುಲ್ಬರ್ಗಾ ಕೋಟೆ, ಚಿತ್ರದುರ್ಗ ಕೋಟೆ ಅದ್ಭುತವಾಗಿವೆ ಎಂದು ವರ್ಣಿಸಿದ್ದಾರೆ. ಈ ಎಲ್ಲಾ ಕೋಟೆಗಳಲ್ಲಿ ದೇಶದ ಸಂಸ್ಕೃತಿ ಮತ್ತು ಸ್ವಾಭಿಮಾನದ ಮೆರುಗನ್ನು ಕಾಣಬಹುದಾಗಿದೆ ಎಂದ ಅವರು, ಅವುಗಳಿಗೆ ಭೇಟಿ ನೀಡಿ, ಇತಿಹಾಸವನ್ನು ಅರಿತು ಹೆಮ್ಮೆಪಡುವಂತೆ ದೇಶವಾಸಿಗಳಿಗೆ ಕರೆ ನೀಡಿದ್ದಾರೆ.

**ಧ್ವನಿ : ನರೇಂದ್ರ ಮೋದಿ, ಪ್ರಧಾನ ಮಂತ್ರಿ ( ೩೧ ಸೆಕೆಂಡುಗಳು )**

ಇದೇ ವೇಳೆ 'ಸ್ವಚ್ಛ ಭಾರತ್ ಅಭಿಯಾನದ' ಯಶಸ್ಸಿನ ಬಗ್ಗೆ ಮಾಹಿತಿ ಹಂಚಿಕೊಂಡ ಪ್ರಧಾನಿ, ಈ ಅಭಿಯಾನದಡಿ ಪ್ರಸಕ್ತ ವರ್ಷ ೪ ಸಾವಿರದ ೫೦೦ಕ್ಕೂ ನಗರ, ಪಟ್ಟಣಗಳು ಸ್ಪರ್ಧೆಗೊಂಡಿದ್ದು, ೧೫ ಕೋಟಿ ಅಧಿಕ ಜನರು ಪಾಲ್ಗೊಂಡಿದ್ದಾರೆ ಎಂದು ಹೇಳಿದರು. ಮಂಗಳೂರಿನಲ್ಲಿ ತಂತ್ರಜ್ಞಾನದ ಮೂಲಕ ತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದೆ ಎಂದು ಮನ್ ಕಿ ಬಾತ್ ನಲ್ಲಿ ಪ್ರಸ್ತಾಪಿಸಿದ ಪ್ರಧಾನಿ, ಸ್ವಚ್ಛತೆ ಎಂಬುದು ಒಂದು ದಿನ ಮಾಡಿ ಬಿಡುವ ಕೆಲಸವಲ್ಲ ಅದು ನಿತ್ಯದ ಕಾಯಕ. ಹೀಗಿದ್ದಾಗ ಮಾತ್ರ ಭಾರತ ಸ್ವಚ್ಛವಾಗಿರಲು ಸಾಧ್ಯ ಎಂದು ತಿಳಿಸಿದ್ದಾರೆ.

**ಧ್ವನಿ : ನರೇಂದ್ರ ಮೋದಿ, ಪ್ರಧಾನ ಮಂತ್ರಿ (೨೭ ಸೆಕೆಂಡುಗಳು )**

ಇದೇ ವೇಳೆ ಶ್ರಾವಣಮಾಸ ಆರಂಭವಾಗಿರುವ ಹಿನ್ನೆಲೆ ದೇಶ ಹಬ್ಬಗಳ ಬಣ್ಣಗಳಿಂದ ಅಲಂಕೃತಗೊಂಡಿದೆ. ನಾಗರಪಂಚಮಿ, ರಕ್ಷಾಬಂಧನ, ಕೃಷ್ಣ ಜನ್ಮಾಷ್ಟಮಿ ಸೇರಿದಂತೆ ವಿವಿಧ ಹಬ್ಬಗಳು ಪ್ರಕೃತಿಯೊಂದಿಗೆ ಜನರ ನಂಟು ಮತ್ತು ಸಮತೋಲನದ ಸಂದೇಶ ನೀಡುತ್ತವೆ ಎಂದ ಪ್ರಧಾನಿ ನರೇಂದ್ರ ಮೋದಿ, ದೇಶವಾಸಿಗಳಿಗೆ ಹಬ್ಬಗಳ ಅಂಗವಾಗಿ ಶುಭ ಹಾರೈಸಿದರು.

><><><><><><><><><><><><><><><><><><

ರಾಜ್ಯದಲ್ಲಿ ಎಪಿಎಲ್ ಹಾಗೂ ಬಿಪಿಎಲ್ ಕಾರ್ಡ್ ಪರಿಷ್ಕರಣೆ ಮಾಡಬೇಕಿದೆ ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ಕೋಟಿ ಎಪಿಎಲ್ ಹಾಗೂ ನಾಲ್ಕು ಕೋಟಿ ಕಾರ್ಡ್ ಬಿಪಿಎಲ್ ಕಾರ್ಡ್‌ಗಳು ಇದ್ದು ಈ ನಿಟ್ಟಿನಲ್ಲಿ ಪರಿಷ್ಕರಣೆ ಮಾಡಬೇಕಾಗಿದೆ ಎಂದು ಹೇಳಿದ್ದಾರೆ. ಸರ್ಕಾರ ನೀಡುವ ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗಬಾರದು ಎಂದು ಎಚ್ಚರಿಕೆ ನೀಡಿದ್ದಾರೆ.

**ಬೈಟ್: ಆಹಾರ ಸಚಿವ ಕೆ.ಎಚ್.ಮುನಿಯಪ್ಪ ( ೧೮ ಸೆಕೆಂಡುಗಳು)**

><><><><><><><><><><><

ರಾಜ್ಯದಲ್ಲಿ ರಸಗೊಬ್ಬರ ಕೊರತೆಗೆ ರಾಜ್ಯ ಸರಕಾರವೇ ಕಾರಣ ಎಂದು ಬಿಜೆಪಿ ಆರೋಪಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರೈತರಿಗೆ ಸಹಕಾರ ನೀಡದೆ ಸರಕಾರ ಕೈ ಚೆಲ್ಲಿ ಕೂತಿದೆ. ರಸಗೊಬ್ಬರ ಅಭಾವಕ್ಕೆ ಮಧ್ಯವರ್ತಿಗಳು ಕಾರಣ ಎಂದು ಅವರು ಆರೋಪಿಸಿದ್ದಾರೆ.  ನಾಳೆಯಿಂದ ರಾಜ್ಯಾದ್ಯಂತ ಹೋರಾಟ ನಡೆಸಲು ಬಿಜೆಪಿ ತೀರ್ಮಾನಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇನ್ನೊಂದೆಡೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ, ಕುರ್ಚಿ ಕಿತ್ತಾಟದಲ್ಲಿ ಸರಕಾರ ರೈತರನ್ನು ನಿರ್ಲಕ್ಷಿಸಿದೆ ಎಂದು ದೂರಿದ್ದಾರೆ.

><><><><><><><><><><><

ವಿಜಯಪುರ  ಜಿಲ್ಲೆಯಲ್ಲಿ ಸಾಕಷ್ಟು ನ್ಯಾನೋ ಯೂರಿಯಾ ಲಭ್ಯವಿದ್ದು, ಯೂರಿಯಾ ಬದಲಾಗಿ ನ್ಯಾನೋ ಯೂರಿಯಾ ಬಳಕೆ ಮಾಡುವಂತೆ ಜಂಟಿ ಕೃಷಿ ಉಪನಿರ್ದೇಶಕರು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಕಾಂಪ್ಲೆಕ್ಸ್ ರಸಗೊಬ್ಬರ ೧೫ ಸಾವಿರದ ೫೬೩ ಟನ್ ಲಭ್ಯವಿದ್ದು, ಈ ರಸಗೊಬ್ಬರವನ್ನು ರೈತರು ಬಳಕೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ೨೦೨೫ರ ಜುಲೈ ಅಂತ್ಯದವರೆಗೆ ಜಿಲ್ಲೆಗೆ ೨೪ ಸಾವಿರದ ೯೫೦ ಟನ್ ಯೂರಿಯಾ ರಸಗೊಬ್ಬರ  ಹಂಚಿಕೆಯಾಗಿದ್ದು, ಈವರೆಗೆ ೩೦ ಸಾವಿರದ

೮೭೦ ಟನ್ ಮಾರಾಟವಾಗಿ ೪ ಸಾವಿರದ ೮೪೨ ಟನ್ ಯೂರಿಯಾ ವಿವಿಧ ಮಾರಾಟಗಾರರಲ್ಲಿ ದಾಸ್ತಾನಿದೆ ಎಂದು ಸ್ಪಷ್ಟ ಪಡಿಸಿದ್ದಾರೆ.

><><><><><><><><><><><

ರಾಜ್ಯದ ವಿವಿಧೆಡೆ ಧಾರಾಕಾರ ಮಳೆಯಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗಿದೆ. ಇಂದು ಮುಂಜಾನೆಯಿಂದ ಸಾಧಾರಣದಿಂದ ಭಾರೀ ಮಳೆಯಾಗುತಿದ್ದು ವೇಗವಾಗಿ ಗಾಳಿ ಬೀಸುತ್ತಿರುವುದರಿಂದ ಹಲವೆಡೆ ಮರಗಳು, ವಿದ್ಯುತ್ ಕಂಬಗಳು ನೆಲಕುರುಳಿವೆ. ಮುಳ್ಳಯ್ಯನಗಿರಿ, ದತ್ತಪೀಠ ಸಂಪರ್ಕಿಸುವ ರಸ್ತೆಯ ಹಲವೆಡೆ ಮರಗಳು ವಿದ್ಯುತ್ ಕಂಬಗಳು ಉರುಳಿ ಬಿದ್ದಿದ್ದು ತಾತ್ಕಾಲಿಕವಾಗಿ ರಸ್ತೆ ಸಂಚಾರ ಬಂದ್ ಆಗಿದೆ.  ಈ ಭಾಗದ ಹಲವು ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಜಿಲ್ಲೆಯ ಶೃಂಗೇರಿ ಕಳಸ ಭಾಗದಲ್ಲು ವ್ಯಾಪಕ ಮಳೆಯಾಗುತ್ತಿದ್ದು ರಾಷ್ಟ್ರೀಯ ಹೆದ್ದಾರಿ ೧೬೯ ರಲ್ಲಿ ಮಣ್ಣು ಕುಸಿದಿದ್ದು ಶೃಂಗೇರಿ ಮಂಗಳೂರು ರಸ್ತೆ ಸಂಚಾರಕ್ಕೆ ಸಮಸ್ಯೆ ಉಂಟಾಗಿದೆ.  ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆ, ಗಾಳಿಯ ಪರಿಸ್ಥಿತಿ ಮುಂದುವರೆದಿದೆ. ಸತತ ೩ ನೇ ದಿನವೂ ಜಿಲ್ಲೆಯಲ್ಲಿ ಧಾರಾಕಾರ ಮಳೆಯಿಂದಾಗಿ ಸಾಮಾನ್ಯ ಜನಜೀವನ ವ್ಯತ್ಯಯ ಕಂಡಿದೆ. ಜಿಲ್ಲೆಯ ಅನೇಕ ಗ್ರಾಮಗಳಲ್ಲಿ ಮರಗಳು ಬಿದ್ದು ವಿದ್ಯುತ್ ಕಂಬಗಳು ಧರೆಗುರುಳಿ ವಿದ್ಯುತ್ ಸಂಪರ್ಕ ಸ್ಥಗಿತಗೊಂಡಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದಾಗಿ ಹಾರಂಗಿ ಜಲಾಶಯಕ್ಕೆ ೨೦ ಸಾವಿರ ಕ್ಯೂಸೆಕ್ ನೀರಿನ ಹರಿವಿದ್ದು ಜಲಾಶಯದಿಂದ ನದಿಗೆ ೨೧ ಸಾವಿರ ಕ್ಯೂಸೆಕ್ ನೀರನ್ನು ಬಿಡಲಾಗುತ್ತಿದೆ. ಕೊಡಗಿನಲ್ಲಿ ಅಪಾಯದಂಚಿನಲ್ಲಿ ವಾಸವಾಗಿರುವ ಜನರು ತಾತ್ಕಾಲಿಕವಾಗಿ  ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಶಾಸಕ ಎ.ಎಸ್. ಪೊನ್ನಣ್ಣ ಮನವಿ ಮಾಡಿದ್ದಾರೆ. ಶಿವಮೊಗ್ಗದಲ್ಲಿ ಭದ್ರಾ ಆಣೆಕಟ್ಟೆಗೆ ಭಾರೀ ಪ್ರಮಾಣದಲ್ಲಿ ನೀರು ಹರಿದು ಬಂದಿದ್ದು, ಅಷ್ಟೇ ಪ್ರಮಾಣದ ನೀರು ಹೊರಗಡೆ ಬಿಡಲಾಗುತ್ತಿದೆ. ನದಿ ಪಾತ್ರದ ಜನರಿಗೆ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ. ಭದ್ರಾ ಡ್ಯಾಂ ಭರ್ತಿಗೆ ಇನ್ನು ಕೇವಲ ೫.೪ ಅಡಿ ನೀರು ಮಾತ್ರ ಬೇಕಿರುವುದರಿಂದ ಮುನ್ನೆಚ್ಚರಿಕಾ ಕ್ರಮವಾಗಿ ಭದ್ರಾ ಡ್ಯಾಂ ಅಧಿಕಾರಿಗಳು ಎಷ್ಟು ಒಳಹರಿವು ಬರುತ್ತಿದೆಯೋ ಅಷ್ಟೇ ಪ್ರಮಾಣದ ನೀರು ಹೊರಗಡೆ ಹರಿಸುತ್ತಿದ್ದು, ಪ್ರವಾಹದ ಭೀತಿ ಶುರುವಾಗಿದೆ. ಮಳೆ ಕುಂಠಿತವಾಗದಿದ್ದರೆ ಇನ್ನೂ ಹೆಚ್ಚಿನ ನೀರು ಜಲಾಶಯದಿಂದ ಹೊರಗಡೆ ಬಿಡಬೇಕಿದ್ದು, ಭದ್ರಾ ಬಲದಂಡೆ ಮತ್ತು ಎಡದಂಡೆ ನಾಲೆಯಲ್ಲಿ

ಹರಿಸುತ್ತಿರುವ ನೀರಿನ ಪ್ರಮಾಣ ಹೆಚ್ಚಾಗುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ. ಜಲಾಶಯದ ಗರಿಷ್ಠ ಮಟ್ಟ ೧೮೬ ಇದ್ದು ಭದ್ರಾ ಡ್ಯಾಂ ಭರ್ತಿಗೆ ಕ್ಷಣಗಣನೆ ಶುರು ವಾಗಿದೆ. ಆಣೆಕಟ್ಟು ಭರ್ತಿಗೆ ಇನ್ನು ಕೇವಲ ೫.೪ ಅಡಿ ನೀರು ಬೇಕಾಗಿದೆ. ಈ ವರ್ಷವೂ ಡ್ಯಾಂ ಭರ್ತಿಯಾಗಲಿದ್ದು, ಭದ್ರಾ ಅಚ್ಚುಕಟ್ಟುದಾರ ಮತ್ತು ದಾವಣಗೆರೆ, ಶಿವಮೊಗ್ಗ ಚಿತ್ರದುರ್ಗ ಜಿಲ್ಲೆಗಳ ರೈತರು ಮತ್ತು ಜನರ ಸಂತಸಕ್ಕೆ ಕಾರಣವಾಗಿದೆ.

><><><><><><><><><><

ಕೆ.ಸಿ.ವ್ಯಾಲಿ ನೀರನ್ನು ಮೂರನೇ ಹಂತದ ಶುದ್ಧೀಕರಣ ಮಾಡಬೇಕು. ಶುದ್ದೀಕರಣ ಮಾಡದಿದ್ದರೆ ರೈತರಿಗೆ ತೊಂದರೆಯಾಗಲಿದೆ ಎಂದು ಸರ್ಕಾರವನ್ನು ಶಾಸಕ ಜಿ.ಕೆ.ವೆಂಕಟಶಿವಾರೆಡ್ಡಿ ಒತ್ತಾಯಿಸಿದ್ದಾರೆ. ಮುದುವಾಡಿ ಕೆರೆಯ ಕೆ.ಸಿ.ವ್ಯಾಲಿ ನೀರಿನ ಪಂಪ್‌ಹೌಸ್‌ಗೆ ಭೇಟಿ ನೀಡಿ ಮಾತನಾಡಿದ ಅವರು, ಕೆ.ಸಿ.ವ್ಯಾಲಿ ನೀರು ಕುಡಿಯಲು ಹಾಗೂ ವ್ಯವಸಾಯಕ್ಕೂ ಯೋಗ್ಯವಾಗಿಲ್ಲ. ನೀರು ಪೂರೈಸಬೇಕೆಂದರೆ ಮೂರನೇ ಹಂತದ ಶುದ್ದೀಕರಣ ಮಾಡಿ ನೀರನ್ನು ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

><><><><><><><><><><

ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ಮೂವರನ್ನು ಸನ್ನಡತೆ ಆಧಾರದಲ್ಲಿ ಬಳ್ಳಾರಿ ಕೇಂದ್ರ ಕಾರಾಗೃಹದಿಂದ ಇಂದು ಬಿಡುಗಡೆ ಮಾಡಲಾಗಿದೆ. ಬಳ್ಳಾರಿಯವರಾದ ಗಾದಿಲಿಂಗಪ್ಪ, ವೀರೇಶ ಮತ್ತು ಕೊಪ್ಪಳದ ಯಮನೂರಪ್ಪ ಬಿಡುಗಡೆಯಾದ ವ್ಯಕ್ತಿಗಳಾಗಿದ್ದಾರೆ. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಬಳ್ಳಾರಿ ಕೇಂದ್ರ ಕಾರಾಗೃಹದ ಅಧೀಕ್ಷಕಿ ಲತಾ ಅವರು ಮೂವರನ್ನೂ ಬಿಡುಗಡೆಗೊಳಿಸಿದ್ದಾರೆ.

><><><><><><><><><><